# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 16.08.2011**

ನಗರದಲ್ಲಿ ನಿನ್ನೆ ರಾತ್ರಿಯಿಡೀ ಸುರಿದ ಮಳೆಯಿಂದ ತೀವ್ರ ತೊಂದರೆಗೆ ಒಳಗಾದ ಬಾಪೂಜಿನಗರದಲ್ಲಿನ ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನಕ್ಕೆ ಇಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ಭೇಟಿ ನೀಡಿ ಪರಿಶೀಲಿಸಿದರು.

ಬಾಪೂಜಿನಗರದ ನೂರಾರು ಸ್ಥಳೀಯ ನಿವಾಸಿಗಳು ಇಂದು ಮಳೆಯಿಂದಾದ ಅನಾಹುತದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಪಾಲಿಕೆಯ ಆಯುಕ್ತರಲ್ಲಿ ಮನವಿ ಮಾಡಿದರು. ಅದಕ್ಕೆ ಸ್ಪಂದಿಸಿದ ಪಾಲಿಕೆ ಆಯುಕ್ತರು ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನದ ಒಳಗೆ ನೀರು ನುಗ್ಗದಂತೆ ಕೂಡಲೇ ಒಂದು ತಿಂಗಳ ಒಳಗಾಗಿ ಅತಿ ಕಿರಿಯದಾದ ಸೇತುವೆಯನ್ನು ಪುನರ್ ನಿರ್ಮಿಸುವಂತೆ ಹಾಗೂ ಸುತ್ತಮುತ್ತಲಿನ ಆಸರೆ ಗೋಡೆಗಳನ್ನು ಎತ್ತರಿಸುವಂತೆ ಸ್ಥಳದಲ್ಲೇ ಹಾಜರಿದ್ದ ಸಂಬಂಧಪಟ್ಟ ಅಭಿಯಂತರರಿಗೆ ಆದೇಶ ನೀಡಿದರು. ಮುಂದುವರೆದು ವೃಷಭಾವತಿ ನಾಲೆಯಲ್ಲಿ ನಿರ್ಮಿಸಲಾಗುತ್ತಿರುವ Road Over Storm Water Drainನ ಎತ್ತರವನ್ನು ಪ್ರಸ್ತಾವಿತ ಸೇತುವೆಯ ಮೇಲ್ಮೈಗೆ ಹೊಂದುವಂತೆ ನಿರ್ಮಿಸಲು ಸಹ ಸೂಚಿಸಿದರು. ನಾಳೆಯಿಂದಲೇ ನಾಲೆಯ ಹೂಳನ್ನು ತೆಗೆಯಲು ಪ್ರಾರಂಭಿಸುವಂತೆ ಮುಖ್ಯ ಅಭಿಯಂತರರು (ದಕ್ಷಿಣ) ರವರಿಗೆ ಸೂಚಿಸಿದರು.

ತದನಂತರ ಆಯುಕ್ತರು ಹಳೇ ಗುಡ್ಡದಹಳ್ಳಿ, ಶಾಮಣ್ಣ ಗಾರ್ಡನ್, ಬಾಪೂಜಿನಗರ, ಪಾದರಾಯನಪುರ ಪಶ್ಚಿಮ, ಟೆಲಿಕಾಂ ಲೇಔಟ್, ಅರುಂಧತಿ ನಗರ, ಗಂಗೊಂಡನಹಳ್ಳಿ, ನಾಯಂಡಹಳ್ಳಿ, ರಾಜರಾಜೇಶ್ವರಿನಗರ, ಐಡಿಯಲ್ ಹೋಮ್ಸ್ ಬಡಾವಣೆಯ ಮಳೆಹಾನಿ ಪ್ರದೇಶಗಳಿಗೆ ಭೇಟಿ ನೀಡಿ, ಕೈಗೊಂಡಿರುವ ಪರಿಹಾರ ಕಾರ್ಯವನ್ನು ಪರಿಶೀಲಿಸಿದರಲ್ಲದೇ ಮಳೆಯಿಂದ ಹಾನಿಗೊಳಗಾಗಿರುವ ಮನೆಗಳನ್ನು ಪುನರ್ ನಿರ್ಮಿಸುವಂತೆ, ಮಳೆ ನೀರು ನುಗ್ಗಿ ಹಾನಿಗೊಳಗಾಗಿರುವ ಮಾಲೀಕರಿಗೆ ಸೂಕ್ತ ಪರಿಹಾರ ನೀಡುವಂತೆ ಹಾಗೂ ಪುನರ್ ವಸತಿ ಕೇಂದ್ರಗಳನ್ನು ತೆರೆದು, ಸಕಲ ಸೌಕರ್ಯಗಳನ್ನು ನೀಡುವಂತೆ ಜಂಟಿ ಆಯುಕ್ತರು (ದಕ್ಷಿಣ) ರವರಿಗೆ ಸೂಚಿಸಿದರು.

ನಗರದಲ್ಲಿ ಇನ್ನೂ 3 ದಿನಗಳ ಕಾಲ ಹೆಚ್ಚು ಮಳೆಯಾಗುವ ಸಾಧ್ಯತೆ ಇರುವುದರಿಂದ ಪಾಲಿಕೆಯ ಎಲ್ಲಾ ಜಂಟಿ ಆಯುಕ್ತರಿಗೆ, ಮುಖ್ಯ ಅಭಿಯಂತರರಿಗೆ ತಮ್ಮ ವಲಯ ವ್ಯಾಪ್ತಿಯಲ್ಲಿ ಮಳೆಯಿಂದ ಆಗಬಹುದಾದ ಅನಾಹುತಗಳನ್ನು ತಪ್ಪಿಸಲು ಉಪ ವಿಭಾಗದ ವ್ಯಾಪ್ತಿಯಲ್ಲಿ ನಿಯಂತ್ರಣ ಕೊಠಡಿಗಳನ್ನು ಸ್ಥಾಪಿಸಿ, ಹೆಚ್ಚಿನ ಸಿಬ್ಬಂದಿಗಳನ್ನು ನಿಯೋಜಿಸಿ, ಅಗತ್ಯವಾದ ಉಪಕರಣಗಳನ್ನು ಸಜ್ಜುಗೊಳಿಸಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದರು. ಹಾಗೂ ಮಳೆಯಿಂದ ಹಾನಿಗೊಳಗಾಗುವ ಪ್ರದೇಶಗಳಿಗೆ ಭೇಟಿ ನೀಡಿ, ತಕ್ಷಣ ಪರಿಹಾರ ಕಾರ್ಯವನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಸದರಿ ವಿಷಯದಲ್ಲಿ ಯಾವುದೇ ಲೋಪಗಳು ಬರದಂತೆ ಎಚ್ಚರವಹಿಸಲು ಸಹ ಸೂಚಿಸಿದರು.

ದಕ್ಷಿಣ ವಲಯದ 27 ಪ್ರದೇಶಗಳು ಮಳೆಯಿಂದ ಹೆಚ್ಚು ಹಾನಿಗೊಳಗಾಗಿದ್ದು, 28 ಮನೆಗಳು ಕುಸಿದಿದ್ದು, 4,405 ಮನೆಗಳಿಗೆ ನೀರು ನುಗ್ಗಿರುತ್ತದೆ. ಸುಮಾರು ರೂ.4.45 ಕೋಟಿ ಖಾಸಗಿ ಆಸ್ತಿಗಳಿಗೆ ನಷ್ಟ ಉಂಟಾಗಿದ್ದು, ಸುಮಾರು 4 ಪುನರ್ ವಸತಿ ಕೇಂದ್ರಗಳನ್ನು ಸ್ಥಾಪಿಸಿ ಅಂದಾಜು ನಾಲ್ಕು ಸಾವಿರ ಜನರಿಗೆ ಪುನರ್ ವಸತಿ ಕಲ್ಪಿಸಲಾಗಿರುತ್ತದೆ. ಮುಂದುವರೆದು, ಸುಮಾರು ರೂ.9.5 ಕೋಟಿ ಸಾರ್ವಜನಿಕ ಆಸ್ತಿ-ಪಾಸ್ತಿಗಳಿಗೆ ನಷ್ಟ ಉಂಟಾಗಿದೆಂದು ಅಂದಾಜಿಸಲಾಗಿದೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**